ಬುಧವಾರ 21.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 122
Digital Varthe Kannada Daily
Volume 01 - Issue 122
Wednesday, 21.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಅಂಬೇಡ್ಕರ್ ಅವಹೇಳನ: ಬಂಧನಕ್ಕೆ ಒತ್ತಾಯ



**ದೊಡ್ಡಬಳ್ಳಾಪುರ** : ರಾಜ್ಯ ಸರ್ಕಾರ ಒಳ ಮೀಸಲಾತಿ ಕುರಿತಂತೆ ರಾಜ್ಯಪಾಲರಿಗೆ ಸಲ್ಲಿಸಿದ್ದ ವರದಿಯನ್ನು ಮರಳಿ ರಾಜ್ಯ ಸರ್ಕಾರಕ್ಕೆ ನೀಡಲಾಗಿದೆ ಈಗಲಾದರೂ ವರದಿಯಲ್ಲಿ ಮಾಡಿರುವ ತಪ್ಪುಗಳನ್ನು ಸರಿ ಪಡಿಸಿ ನ್ಯಾಯಮೂರ್ತಿ ನಾಗಮೋಹನ್ ದಾಸ್ ವರದಿಯನ್ನು ಯಥಾವತ್ ಜಾರಿ ಮಾಡಿ ಎಂದು ಮಾದರ ಚನ್ನಯ್ಯ ಮಹಾಸಭಾ ಮುಖಂಡರಾದ ವೆಂಕಟೇಶ್ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿ ಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಸತತವಾಗಿ 30ವರ್ಷಗಳ ಅವಿರತ ಹೋರಾಟದ ನಂತರ ಒಳ ಮೀಸಲಾತಿ ದೊರೆಯುತ್ತಿದ್ದು ರಾಜ್ಯ ಸರ್ಕಾರ ಕೆಲ ರಾಜಕೀಯ ಪ್ರಭಾವಗಳಿಗೆ ಒಳಗಾಗಿ ಮಾದಿಗ ಹಾಗೂ ಅಲೆಮಾರಿ ಸಮುದಾಯಗಳಿಗೆ ಅರ್ಹ ಮೀಸಲಾತಿ ನೀಡುವಲ್ಲಿ ಎಡವಿದೆ ಆದರೆ ಅದನ್ನು ಸರಿ ಪಡಿಸಲು ಈಗ ಅವಕಾಶವಿದ್ದು ರಾಜ್ಯಪಾಲರಿಂದ ಮರಳಿ ಬಂದಿರುವ ವರದಿಯನ್ನು ಸರಿ ಪಡಿಸುವ ಮೂಲಕ ಸೂಕ್ತ ನಿರ್ಣಯ ಕೈಗೊಳ್ಳಬೇಕು ಎಂದರು.

ಮುಖಂಡರಾದ ತಳಗವಾರ ನಾಗರಾಜ್ ಮಾತನಾಡಿ ಮೀಸಲಾತಿ ನಮ್ಮ ಹಕ್ಕು ಅದನ್ನು ನಾವು ಕೇಳುತ್ತಿ ದ್ದೇವೆ ಅಷ್ಟೇ ಜನಸಂಖ್ಯೆ ಹೆಚ್ಚಿರುವ ಮಾದಿಗ ಸಮುದಾಯಕ್ಕೆ ಅರ್ಹ ಮೀಸಲಾತಿ ನೀಡಬೇಕು ಹಾಗೂ ಅಲೆಮಾರಿ ಸಮುದಾಯವನ್ನು ಬಲಿಷ್ಠ ಸಮುದಾಯಗಳ ಪಟ್ಟಿಯಲ್ಲಿ ಸೂಚಿಸಲಾಗಿದೆ ದಯವಿಟ್ಟು ಅವರನ್ನು ಪ್ರತ್ಯೇಕ ಗೊಳಿಸಿ ಮೀಸಲಾತಿ ಜಾರಿಗೊಳಿಸಬೇಕು ಎಂದರು.

**26ಕ್ಕೆ ಕಪ್ಪು ಪಟ್ಟಿ ಧರಿಸಿ ಸರ್ಕಾರದ ವಿರುದ್ಧ ಹೋರಾಟ:** ಒಳ ಮೀಸಲಾತಿ ಕುರಿತಂತೆ ಸರ್ಕಾರ ಸೂಕ್ತ ನಿರ್ಧಾರ ಕೈಗೊಂಡು ಎಲ್ಲಾ ಸಮುದಾಯಗಳಿಗೆ ನ್ಯಾಯ ಒದಗಿಸಬೇಕು ಮುಖ್ಯವಾಗಿ ಅಲೆಮಾರಿ ಸಮುದಾಯಕ್ಕೆ ಹಾಗೂ ಮಾದಿಗ ಸಮುದಾಯಕ್ಕೆ ಅರ್ಹ ಮೀಸಲಾತಿ ನೀಡಿ ವರದಿಯನ್ನು ರಾಜ್ಯಪಾಲರಿಗೆ ಸಲ್ಲಿಸಬೇಕು ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನ ಕಾರಿಯಾಗಿ ಪೋಸ್ಟ್ ಹಾಕುತ್ತಿರುವ ಗುಲಾಮರ ಅಪ್ಪ ಎಂಬ ಗ್ರೂಪಿನ ಅಡ್ಮಿನ್ ಅನ್ನು ಜನವರಿ 26ರ ಒಳಗಾಗಿ ಬಂಧಿಸಬೇಕು ಇಲ್ಲವೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

**ಒಳ ಮೀಸಲಾತಿ ಕುರಿತು ಶೀಘ್ರಕ್ರಮ ಕೈಗೊಳ್ಳಿ :** ಇನೇನು ಸಿ ಈ ಟಿ ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳು ನೆಡೆಯಲಿದ್ದು ಸಮುದಾಯದ ಮಕ್ಕಳಿಗೆ ಮೀಸಲಾತಿ ಸಹಾಯಕರವಾಗಲಿದೆ ಹಾಗಾಗಿ ಸರ್ಕಾರ ಶೀಘ್ರಗತಿಯಲ್ಲಿ ಒಳ ಮೀಸಲಾತಿ ವರದಿ ವಿಚಾರದಲ್ಲಿ ಕ್ರಮಗೊಂಡು ರಾಜ್ಯಪಾಲರಿಗೆ ಸಲ್ಲಿಸಬೇಕು ಎಂದು ಅಗ್ರಹಿಸಿದರು.

## ಕೆ.ಆರ್.ನೀಲಕಂಠಗೆ ರಸ್ತೆ ಬದಿ ವ್ಯಾಪಾರಿಗಳ ಮಹಿಳಾ ಘಟಕದಿಂದ ಸನ್ಮಾನ



ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿಗೆ ಭಾಜನರಾಗಿರುವ ಹಿರಿಯ ಪತ್ರಕರ್ತ ಕೆ.ಆರ್. ನೀಲಕಂಠ ರವರನ್ನು ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲ್ಲೂಕಿನ ಚಾಮುಂಡೇಶ್ವರಿ ರಸ್ತೆ ಬದಿ ವ್ಯಾಪಾರಿಗಳ ಮಹಿಳಾ ಘಟಕದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಜಯಕರ್ನಾಟಕ ಸಂಘಟನೆಯ ತಾಲ್ಲೂಕು ಮಹಿಳಾ ಅಧ್ಯಕ್ಷೆ ಜಯಲಕ್ಷ್ಮಮ್ಮ ರವರು ಕೆ.ಆರ್. ನೀಲಕಂಠ ಅವರು 35 ವರ್ಷಗಳಿಂದ ಪತ್ರಿಕೋದ್ಯಮದಲ್ಲಿ ಸಕ್ರಿಯರಾಗಿದ್ದು, ತಾಲ್ಲೂಕಿನಲ್ಲಿ ಇರುವ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಇವರ ಈ ಸೇವೆಯನ್ನು ಗುರುತಿಸಿ ಮಾಧ್ಯಮ ಅಕಾಡೆಮಿ ಪ್ರಶಸ್ತಿ ನೀಡಿರುವುದು ಇಡಿ ಕೃಷ್ಣರಾಜಪೇಟೆ ತಾಲ್ಲೂಕಿಗೆ ಹೆಮ್ಮೆಯ ವಿಷಯ ಎಂದು ಶುಭ ಹಾರೈಸಿದರು,

ಸನ್ಮಾನ ಸ್ವೀಕರಿಸಿ ಮಾತನಾಡಿದ ಕೆ.ಆರ್. ನೀಲಕಂಠ ರವರು ಸಮಾಜದ ಕಟ್ಟಕಡೆಯ ವ್ಯಕ್ತಿಯ ಧ್ವನಿಯಾ ಗುವುದು ಪತ್ರಿಕೋದ್ಯಮದ ಮುಖ್ಯ ಉದ್ದೇಶ ನನ್ನ 35 ವರ್ಷಗಳ ಸೇವೆಗೆ ಈ ದಿನ ಪ್ರತಿಫಲ ಸಿಕ್ಕಿದೆ ಈ ದಿನ ಶ್ರಮಜೀವಿಗಳಾದ ತಾಲ್ಲೂಕಿನ ಚಾಮುಂಡೇಶ್ವರಿ ರಸ್ತೆ ಬದಿ ವ್ಯಾಪಾರಿ ಮಹಿಳಾ ಘಟಕದ ವತಿಯಿಂದ ನೀಡಿದ ಈ ಗೌರವ ನನ್ನ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ, ಎಂದು ಕೃತಜ್ಞತೆ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಹಿರಿಯ ಪತ್ರಕರ್ತ ಹಾಗೂ ಉದ್ಯಮಿಗಳಾದ ಸತೀಶ್, ಜಯಕರ್ನಾಟಕ ಸಂಘಟನೆ ತಾಲ್ಲೂಕು ಮಹಿಳಾ ಘಟಕದ ಅಧ್ಯಕ್ಷೆ ಜಯಲಕ್ಷ್ಮಮ್ಮ, ಚಾಮುಂಡೇಶ್ವರಿ ರಸ್ತೆ ಬದಿ ವ್ಯಾಪಾರಿಗಳ ಮಹಿಳಾ ಘಟಕದ ಅಧ್ಯಕ್ಷೆ ರತ್ನಮ್ಮ, ಕಾರ್ಯದರ್ಶಿ ದ್ರಾಕ್ಷಯಿಣಿ, ಪದಾಧಿಕಾರಿಗಳಾದ ಪುಟ್ಟಮ್ಮ, ಚೈತ್ರ, ಮಂಜುಳಮ್ಮ, ಅಭಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು,

## ಸಮಾಜದ ಏಳಿಗೆಗೆ ಶ್ರಮಿಸಲು ಕರೆ:ಕೆ.ಆರ್.ಪುಟ್ಟಸ್ವಾಮಿ



**ಕೃಷ್ಣರಾಜಪೇಟೆ:** ಪಟ್ಟಣದ ಪ್ರಸಿದ್ಧ ಧಾರ್ಮಿಕ ಕೇಂದ್ರವಾದ ತೊಗಟವೀರ ಶ್ರೀರಾಮ ಮಂದಿರ ಸೇವಾ ಟ್ರಸ್ಟ್ ಹಾಗೂ ಶ್ರೀ ಚಾಮುಂಡೇಶ್ವರಿ ಕರಗ ಮಹೋತ್ಸವ ಸನ್ನಿಧಿಯಲ್ಲಿ ಸಮಾಜದ ಇಬ್ಬರು ಪ್ರಮುಖ ಸಾಧಕರಿಗೆ ಆತ್ಮೀಯ ಸನ್ಮಾನ ಹಾಗೂ ಗೌರವ ಸಮರ್ಪಣೆ ಮಾಡಲಾಯಿತು.

ಕರ್ನಾಟಕ ಸರ್ಕಾರದಿಂದ ಪ್ರತಿಷ್ಠಿತ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಪತ್ರಕರ್ತರಾದ ಕೆ.ಆರ್.ನೀಲಕಂಠಣ್ಣ ಹಾಗೂ ಕರ್ನಾಟಕ ರಾಜ್ಯ ಕೈಗಾರಿಕಾ ಸರಬರಾಜು ಮತ್ತು ಮಾರಾಟ ಸಹಕಾರ ಮಹಾಮಂಡಳಿ ನಿಯಮಿತದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಬಸ್ ಸಂತೋಷ್ ಕುಮಾರ್ ರವರಿಗೆ ಸಮಾಜದ ವತಿಯಿಂದ ಈ ಗೌರವ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗಣ್ಯರು ಮಾತನಾಡಿ ಕೆ.ಆರ್. ನೀಲಕಂಠಣ್ಣ ಅವರು ಪತ್ರಿಕೋದ್ಯಮದಲ್ಲಿ ದಶಕಗಳ ಕಾಲ ಮೌಲ್ಯಾಧಾರಿತ ಸೇವೆ ಸಲ್ಲಿಸುವ ಮೂಲಕ ತಾಲೂಕಿಗೆ ಕೀರ್ತಿ ತಂದಿದ್ದಾರೆ. ಅದೇ ರೀತಿ, ಬಸ್ ಸಂತೋಷ್‌ಕುಮಾರ್ ಅವರು ಸಹಕಾರ ಕ್ಷೇತ್ರದಲ್ಲಿ ರಾಜ್ಯಮಟ್ಟದ ಜವಾಬ್ದಾರಿ ವಹಿಸಿಕೊಂಡಿರುವುದು ಹೆಮ್ಮೆಯ ವಿಷಯ. ಇಂತಹ ಸಾಧಕರು ಯುವ ಪೀಳಿಗೆಗೆ ಸ್ಪೂರ್ತಿಯಾಗಿದ್ದಾರೆ ಎಂದು ಶಿಕ್ಷಣ ತಜ್ಞ ಕೆ.ಆರ್. ಪುಟ್ಟಸ್ವಾಮಿ ರವರು ಶ್ಲಾಘಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಕೆ.ಆರ್. ನೀಲಕಂಠಣ್ಣ ಅವರು, "ಸಮಾಜ ನೀಡುವ ಈ ಗೌರವ ನನ್ನ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ," ಎಂದು ಕೃತಜ್ಞತೆ ಸಲ್ಲಿಸಿದರು. ನಂತರ ಮಾತನಾಡಿದ ಬಸ್ ಸಂತೋಷ್‌ಕುಮಾರ್ ಅವರು, "ಸಹಕಾರ ಕ್ಷೇತ್ರದ ಮೂಲಕ ರಾಜ್ಯದ ಕೈಗಾರಿಕಾ ಪ್ರಗತಿಗೆ ಹಾಗೂ ಸಮಾಜದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ" ಭರವಸೆ ನೀಡಿದರು.ಮಂಡ್ಯ ಜಿಲ್ಲಾ ನೇಕಾರ ತೊಗಟವೀರ ಸಂಘದ ಅಧ್ಯಕ್ಷ ಹಂಸ ರಮೇಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ ಮಂಡ್ಯ ಹಾಗೂ ಮೈಸೂರು ಜಿಲ್ಲಾ ನೇಕಾರ ತೊಗಟವೀರ ಸಂಘದ ಅಧ್ಯಕ್ಷ ಇಂಜಿನಿಯರ್ ವೆಂಕಟೇಶ್, ಶ್ರೀರಂಗಪಟ್ಟಣ ಎಸ್.ಜೆ.ಕುಮಾರಸ್ವಾಮಿ, ಜನ ಮೆಚ್ಚಿದ ಶಿಕ್ಷಕರು ಹಾಗೂ ಉದಯೋನ್ಮುಖ ಬರಹಗಾರರಾದ ರವಿಕುಮಾರ್, ಕರ್ನಾಟಕ ರಾಜ್ಯ ಪಡಿತರ ವಿತರಕರ ಸಂಘದ ರಾಜ್ಯ ಉಪಾಧ್ಯಕ್ಷ ಅಂಚನಹಳ್ಳಿ ಸುಬ್ಬಣ್ಣ, ಶಿಕ್ಷಣ ತಜ್ಞ ಕೆ.ಆರ್. ಪುಟ್ಟಸ್ವಾಮಿ, ಪುರಸಭೆ ಸದಸ್ಯೆಯ ಇಂದ್ರಾಣಿ ವಿಶ್ವನಾಥ್, ಪುರಸಭೆ ಮಾಜಿ ಅಧ್ಯಕ್ಷ ಕೆ.ಹೆಚ್.ರಾಮಕೃಷ್ಣ ಮಾಸ್ಟರ್, ಕೃಷ್ಣರಾಜಪೇಟೆ ತಾಲೂಕು ಬಿಜೆಪಿ ಮಹಿಳಾ ಮೋರ್ಚಾ ನಗರ ಘಟಕದ ಅಧ್ಯಕ್ಷರಾದ ಚಂದ್ರಕಲಾ ರಮೇಶ್, ಉದ್ಯಮಿ ಹೊನ್ನಾವರ ಚಂದ್ರಶೇಖರ್, ಕೆಎಚ್‌ಆರ್ ಚಂದ್ರಶೇಖರ್, ಕೆ.ಎಂ. ರವಿನಂದನ, ವೈಸಿಆರ್ ಈವೆಂಟ್ಸನ ವ್ಯವಸ್ಥಾಪಕ ನಿರ್ದೇಶಕ ರಾಮಪ್ರಸಾದ್, ಉಂಡಿಗನಹಾಳು ಬಸವರಾಜು, ನೇಕಾರ ತೊಗಟವೀರ ಸಮಾಜದ ಹಿರಿಯ ಮುಖಂಡರಾದ ಮೀಸೆ ರಮೇಶ್, ಹೊಸಹೊಳಲಿನ ಸುರೇಶ್ ಹರಿಜನ ಸೇರಿದಂತೆ ನೂರಾರು ಜನರು ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಬಾದಾಮಿ ಕ್ಷೇತ್ರದ ಅಭಿವೃದ್ಧಿಗೆ 2000 ಕೋಟಿ ಅನುದಾನ ನೀಡಲಾಗಿದೆ-ಮುಖ್ಯಮಂತ್ರಿ ಸಿದ್ದರಾಮಯ್ಯ



**ಬಾಗಲಕೋಟೆ:** ಬಾದಾಮಿ ಕ್ಷೇತ್ರಕ್ಕೆ ಕಳೆದೆರಡು ವರ್ಷಗಳ್ಳಲಿ 2000 ಕೋಟಿ ಅನುದಾನ ನೀಡಲಾಗಿದ್ದು, ಬಾದಾಮಿಯ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಬಾಗಲಕೋಟೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ ವತಿಯಿಂದ ಬಾದಾಮಿಯ ಇಮ್ಮಡಿ ಪುಲಿಕೇಶಿ ವೇದಿಕೆಯಲ್ಲಿ ಆಯೋಜಿಸಲಾಗಿದ್ದ ಚಾಲುಕ್ಯ ಉತ್ಸವ -2026 ಉದ್ಘಾಟಿಸಿ ಮಾತನಾಡಿದರು.

**ನಮ್ಮ ಸರ್ಕಾರ ನುಡಿದಂತೆ ನಡೆಯುತ್ತದೆ**: ಚಾಲುಕ್ಯರು ನಿರ್ಮಿಸಿದ ದೇಗುಲಗಳ ವಾಸ್ತುಶಿಲ್ಪದ ಮಹತ್ವ ಅರಿಯುವ ಉದ್ದೇಶವನ್ನು ಚಾಲುಕ್ಯ ಉತ್ಸವ ಹೊಂದಿದೆ. ಬಾದಾಮಿ ಐಹೊಳೆ ಪಟ್ಟದಕಲ್ಲುಗಳ ವೈಭವವನ್ನು ವೀಕ್ಷಿಸಲು ದೇಶವಿದೇಶಗಳಿಂದ ಜನರು ಬರುತ್ತಾರೆ. ಚಾಲುಕ್ಯರ ಆಡಳಿತ ವೈಖರಿಯಂತೆ ನಮ್ಮ ಸರ್ಕಾರವೂ ಸರ್ವಧರ್ಮಗಳ ಸಮನ್ವಯತೆಯನ್ನು ಪಾಲಿಸುತ್ತದೆ. ನಾನು ಮುಖ್ಯಮಂತ್ರಿಯಾಗಿ ಈ ಎರಡು ವರ್ಷದಲ್ಲಿ ಬಾದಾಮಿಕ್ಷೇತ್ರಕ್ಕೆ ಸುಮಾರು 2 ಸಾವಿರ ಕೋಟಿ ರೂ.ಗಳ ಅನುದಾನವನನ್ನು ನೀಡಿದ್ದೇನೆ. 1400 ಕೋಟಿ ರೂ.ಗಳ ಏತನೀರಾವರಿ ಯೋಜನೆ ಕೈಗೆತ್ತಿಕೊಳ್ಳಲಾಗುವುದು. ಅಲ್ಲದೇ 400 ಕೋಟಿ ರೂ.ಗಳಲ್ಲಿ ಬಾದಾಮಿಗೆ ಕುಡಿಯುವ ನೀರಿನ ಯೋಜನೆ, 50 ಕೋಟಿ ರೂ.ಗಳಲ್ಲಿ ರಸ್ತೆ ಯೋಜನೆ ಸೇರಿದಂತೆ ಹಲವು ಅಭಿವೃದ್ದಿ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ನಮ್ಮ ಸರ್ಕಾರ ನುಡಿದಂತೆ ನಡೆಯುವ ಸರ್ಕಾರ. ನಮ್ಮ ಪ್ರಣಾಳಿಕೆಯಲ್ಲಿ 590 ಭರವಸೆಗಳಲ್ಲಿ 240 ಈಡೇರಿಸಲಾಗಿದ್ದು, 5 ಗ್ಯಾರಂಟಿಗಳನ್ನು ಜಾರಿಗೊಳಿಸಲಾಗಿದೆ ಎಂದರು.

**ಬಾದಾಮಿ ಕ್ಷೇತ್ರದ ಜನರ ಉಪಕಾರವನ್ನು ಎಂದೂ ಮರೆಯುವುದಿಲ್ಲ** : ಐದು ವರ್ಷಗಳ ಕಾಲ ಬಾದಾಮಿ ಕ್ಷೇತ್ರದ ಶಾಸಕನಾಗಿದ್ದೆ, 2018 ರಲ್ಲಿ ಎರಡು ಕ್ಷೇತ್ರಗಳಲ್ಲಿ ಸ್ಪರ್ಧೆ ಸ್ಪರ್ಧಿಸಿದ್ದು, ಐದು ಬಾರಿ ಗೆದ್ದಿದ್ದ ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸೋಲಿಸಲಾಯಿತು. ಆದರೆ ಬಾಗಲಕೋಟೆ ಜಿಲ್ಲೆಯ ಬಾದಾಮಿ ಕ್ಷೇತ್ರದಲ್ಲಿ ನನ್ನನ್ನು ಗೆಲ್ಲಿಸಿದ್ದರು ಎನ್ನುವುದನ್ನು ಮರೆಯಲು ಸಾಧ್ಯವಿಲ್ಲ. ಬಾದಾಮಿ ಕ್ಷೇತ್ರಕ್ಕೆ ಬಂದು ಎರಡು ಅಥವಾ ಮೂರು ಬಾರಿ ಸಾರ್ವಜನಿಕ ಸಭೆಯಲ್ಲಿ ಭಾಷಣ ಮಾಡಿ ಜನರ ಆಶೀರ್ವಾದ ಬೇಡಿರಬಹುದು. ಇಲ್ಲಿನ ಜನರು ದೊಡ್ಡ ಮನಸ್ಸು ಮಾಡಿ ವಿಧಾನಸಭೆಗೆ ಕಳುಹಿಸಿಕೊಟ್ಟಿದ್ದರಿಂದ ವರುಣಾ ಕ್ಷೇತ್ರದಲ್ಲಿ ಗೆದ್ದು ಮಂತ್ರಿಯಾಗಲು ಸಾಧ್ಯವಾಯಿತು ಎನ್ನುವುದನ್ನು ಮರೆಯಲಾಗುವುದಿಲ್ಲ. ನಿಮ್ಮ ಉಪಕಾರವನ್ನು ನಾನೆಂದಿಗೂ ಮರೆಯುವುದಿಲ್ಲ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಶಾಸಕನಾಗಿದ್ದಾಗ ಉತ್ಸವ ನಡೆಯಲಿಲ್ಲ ಎನ್ನುವುದು ನೋವಿನ ಸಂಗತಿ ಬಾದಾಮಿ ಶಾಸಕನಾಗಿದ್ದ ಸಂದರ್ಭದಲ್ಲಿ ಚಾಲುಕ್ಯ ಉತ್ಸವ ನಡೆಯಲಿಲ್ಲ ಹಾಗೂ ಇಮ್ಮಡಿ ಪುಲಕೇಶಿ ಪ್ರತಿಮೆ ಸ್ಥಾಪನೆಯಾಗಲಿಲ್ಲ ಎನ್ನುವುದು ನೋವಿನ ಸಂಗತಿ. ಇಂದು ಭೀಮಸೇನಾ ಚಿಮ್ಮನಕಟ್ಟಿಯವರ ಒತ್ತಾಯದಿಂದ ಪ್ರತಿಮೆ ಸ್ಥಾಪನೆಗೆ ಶಂಕುಸ್ಥಾಪನೆ ನೆರವೇರಿಸಲಾಗಿದೆ ಎಂದರು.

**ಉತ್ಸವಕ್ಕೆ ಒಂದು ಕೋಟಿ ಹೆಚ್ಚುವರಿಯಾಗಿ ನೀಡಲಾಗುವುದು**:ಈ ವರ್ಷ ಚಾಲುಕ್ಯ ಉತ್ಸವ ನಡೆಯಲೇಬೇಕೆಂದು ಈ ಭಾಗದ ಶಾಸಕರ ಒತ್ತಾಯದ ಮೇರೆಗೆ ಬಜೆಟ್ ನಲ್ಲಿಯೇ ಚಾಲುಕ್ಯ ಉತ್ಸವವನ್ನು ಘೋಷಣೆ ಮಾಡಲಾಯಿತು. ಮೂರು ಕೋಟಿ ರೂ ಗಳನ್ನೂ ಇದಕ್ಕಾಗಿ ಒದಗಿಸಲಾಗಿದೆ. ಉತ್ಸವಕ್ಕೆ ಒಂದು ಕೋಟಿ ರೂ ಗಳನ್ನು ಹೆಚ್ಚುವರಿಯಾಗಿ ನೀಡಲಾಗುವುದು ಎಂದರು. ಇಮ್ಮಡಿ ಪುಲಕೇಶಿ ಪ್ರತಿಮೆ ಅನಾವರಣಕ್ಕೆ ಸರ್ಕಾರ ನೆರವು ಒದಗಿಸಲಿದೆ ಎಂದರು.

**ಕೇಂದ್ರ ಸರ್ಕಾರದ ನೆರವಿಗೆ ಮನವಿ ಪತ್ರ**:ಕೇಂದ್ರ ಸರ್ಕಾರದಿಂದ ನೆರವು ಒದಗಿಸುವುದಾಗಿ ಸಂಸದರು ತಿಳಿಸಿದ್ದು ಇದಕ್ಕೆ ಮನವಿ ಪತ್ರವನ್ನು ನಾಳೆಯೇ ಕೊಡಲಾಗುವುದು. ಕೇಂದ್ರ ಸರ್ಕಾರ ನಮ್ಮ ಮನವಿಗಳಿಗೆ ಹೋಗುತ್ತಿಲ್ಲ ಎಂಬ ಹಿನ್ನೆಲೆಯಲ್ಲಿ ಇವರಿಗೆ ಮನವಿಯನ್ನು ನೀಡಿರಲಿಲ್ಲ ಎಂದರು. ರಾಜ್ಯದ ಮನವಿಗಳಿಗೆ ಕೇಂದ್ರ ಸರ್ಕಾರ ಕಿವಿಗೊಡುತ್ತಿಲ್ಲ. ರಾಜ್ಯಸರ್ಕಾರ ಸಧ್ಯದಲ್ಲಿಯೇ ಮನವಿಯನ್ನು ಸಲ್ಲಿಸುತ್ತದೆ. ಕೇಂದ್ರದಿಂದ ರಾಜ್ಯಕ್ಕೆ ಬರಬೇಕಾದ ನ್ಯಾಯಯುತ ಅನುದಾನವನ್ನು ಕೊಡಿಸಲು ಬಿಜೆಪಿ ಸಂಸದರು ಪ್ರಯತ್ನಿಸಬೇಕು ಎಂದರು.

## ಗಾಂಜಾ ಸಾಗಾಟಕ್ಕೆ ಬ್ರೇಕ್: ಖಾಕಿ ರೇಡ್‌ನಲ್ಲಿ ಇಬ್ಬರು ಬಂಧನ



**ದಕ್ಷಿಣ ಕನ್ನಡ** ಜಿಲ್ಲೆಯಲ್ಲಿ ಮಾದಕ ವಸ್ತು ಜಾಲದ ವಿರುದ್ಧ ಪೊಲೀಸ್ ಇಲಾಖೆ ನಿರಂತರ ಹಾಗೂ ತೀವ್ರ ಕಾರ್ಯಾಚರಣೆ ಕೈಗೊಂಡಿದ್ದು, ಡ್ರಗ್ಸ್ ದಂಧೆಕೋರರ ಹುಟ್ಟಡಗಿಸುವ ಕಾರ್ಯದಲ್ಲಿ ಮಹತ್ವದ ಯಶಸ್ಸು ಸಾಧಿಸುತ್ತಿದೆ. ಒಂದೊಂದೇ ಪ್ರಕರಣವನ್ನು ಸೂಕ್ಷ್ಮವಾಗಿ ಭೇದಿಸಿ ಆರೋಪಿಗಳನ್ನು ಬಂಧಿಸುವ ಮೂಲಕ ಜಿಲ್ಲೆಯನ್ನು ಮಾದಕ ವಸ್ತು ಮುಕ್ತವಾಗಿಸಲು ಪೊಲೀಸರು ಶ್ರಮಿಸುತ್ತಿದ್ದಾರೆ.

ಇತ್ತೀಚೆಗೆ ಮಂಗಳೂರು ಸಿಸಿಬಿ ಪೊಲೀಸರು ನಡೆಸಿದ್ದ ಭರ್ಜರಿ ಕಾರ್ಯಾಚರಣೆ ರಾಜ್ಯಾದ್ಯಂತ ಗಮನ ಸೆಳೆದಿದ್ದು, 4 ಕೋಟಿ ರೂಪಾಯಿ ಮೌಲ್ಯದ ಎಂಡಿಎಂಎ ಡ್ರಗ್ಸ್ ಸಹಿತ ಉಗಾಂಡ ಮೂಲದ ಮಹಿಳೆಯನ್ನು ಬೆಂಗಳೂರಿನಲ್ಲಿ ಬಂಧಿಸಲಾಗಿತ್ತು. ಈ ಕಾರ್ಯಾಚರಣೆಯ ಬೆನ್ನಲ್ಲೇ ಇದೀಗ ಮತ್ತೊಂದು ಮಹತ್ವದ ಪ್ರಕರಣ ಬೆಳಕಿಗೆ ಬಂದಿದ್ದು, ಗೂಡ್ಸ್ ವಾಹನದಲ್ಲಿ ಸಾಗಾಟ ಮಾಡಲಾಗುತ್ತಿದ್ದ ಭಾರೀ ಪ್ರಮಾಣದ ಗಾಂಜಾವನ್ನು ಪುತ್ತೂರು ತಾಲೂಕಿನ ಪಡುವನ್ನೂರು ಗ್ರಾಮದ ಸಜಂಕಾಡಿ ಪ್ರದೇಶದಲ್ಲಿ ಪೊಲೀಸರು ಸೀಜ್ ಮಾಡಿದ್ದಾರೆ.

ಈ ಕಾರ್ಯಾಚರಣೆಯಲ್ಲಿ ಸುಮಾರು 106 ಕೆಜಿ ಗಾಂಜಾವನ್ನು ಪೊಲೀಸರು ವಶಕ್ಕೆ ಪಡೆದಿದ್ದು, ಇದರ ಅಂದಾಜು ಮೌಲ್ಯ ಸುಮಾರು 53 ಲಕ್ಷ ರೂಪಾಯಿಗಳು ಎಂದು ತಿಳಿದುಬಂದಿದೆ. ಪ್ರಕರಣ ಸಂಬಂಧ ಬೆಳ್ತಂಗಡಿ ತಾಲೂಕಿನ ಚಾರ್ಮಾಡಿ ನಿವಾಸಿಗಳಾದ ಅಬ್ದುಲ್ ಸಾದಿಕ್ (37) ಹಾಗೂ ರಫೀಕ್ ಪಿ. (37) ಎಂಬ ಇಬ್ಬರನ್ನು ಬಂಧಿಸಲಾಗಿದೆ. ಈ ಬಗ್ಗೆ ಪುತ್ತೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಳ್ಳಲಾಗಿದೆ.

ಇದೇ ವೇಳೆ, ನಿನ್ನೆಯಷ್ಟೇ ಮತ್ತೊಂದು ಕಾರ್ಯಾಚರಣೆಯಲ್ಲಿ ವಿದ್ಯಾರ್ಥಿಗಳಿಗೆ ಮಾದಕ ವಸ್ತು ಪೂರೈಕೆ ಮಾಡುತ್ತಿದ್ದ ಕೇರಳ ಮೂಲದ ಯುವಕನನ್ನು ಪೊಲೀಸರು ಬಂಧಿಸಿದ್ದಾರೆ. ಕೇರಳದ ಎರ್ನಾಕುಲಂ ಜಿಲ್ಲೆಯ ಮುತೊಲಪುರಂ ನಿವಾಸಿಯಾದ ಜೂಡ್ ಮಾಥ್ಯೂ (20) ಎಂಬಾತನನ್ನು ಕದ್ರಿ ಪೊಲೀಸರು ಬಂಧಿಸಿದ್ದು, ಆತ ಬೈಕ್‌ನಲ್ಲಿ ಎಂಡಿಎಂಎ ಸಾಗಿಸುತ್ತಿದ್ದ ವೇಳೆ ಪದವು ಗ್ರಾಮದ ಕೈಲಾಸ ಕಾಲೋನಿ ಬಳಿ ದಾಳಿ ನಡೆಸಿ ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ. ಈ ವೇಳೆ ಬೈಕ್ ಸಹಿತ ಮಾದಕ ವಸ್ತುವನ್ನು ಜಪ್ತಿ ಮಾಡಲಾಗಿದ್ದು, ಸೀಜ್ ಮಾಡಲಾದ ವಸ್ತುಗಳ ಮೌಲ್ಯ ಸುಮಾರು 70 ಸಾವಿರ ರೂಪಾಯಿಗಳು ಎಂದು ಅಂದಾಜಿಸಲಾಗಿದೆ. ಈ ಪ್ರಕರಣವೂ ಕದ್ರಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

ಇನ್ನು ಜಿಲ್ಲೆಯಲ್ಲಿ ಆರು ಪೆಡ್ಲರ್‌ಗಳಿಗೆ ಡ್ರಗ್ಸ್ ಪೂರೈಸುತ್ತಿದ್ದ ಉಗಾಂಡ ಮೂಲದ ಮಹಿಳೆಯನ್ನು ಮಂಗಳೂರು ಸಿಸಿಬಿ ಪೊಲೀಸರು ಇತ್ತೀಚೆಗೆ ಬೆಂಗಳೂರಿನ ಜಿಗಣಿ ಬಳಿ ಬಂಧಿಸಿದ್ದರು. ಜಲಿಯಾ ಝುಲ್ವಾಂಗೋ ಎಂಬ ಈ ಮಹಿಳೆ ಬಳಿ ಇದ್ದ 4 ಕೋಟಿ ರೂಪಾಯಿ ಮೌಲ್ಯದ MDMA ಡ್ರಗ್ಸ್ ಅನ್ನು ಪೊಲೀಸರು ವಶಕ್ಕೆ ಪಡೆದಿದ್ದರು. ಸಿಸಿಬಿ ಎಸಿಪಿ ಮನೋಜ್ ಕುಮಾರ್ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಾಚರಣೆ ಮಾದಕ ವಸ್ತು ಜಾಲದ ವಿರುದ್ಧ ದೊಡ್ಡ ಹೊಡೆತವಾಗಿದ್ದು, ರಾಜ್ಯದಾದ್ಯಂತ ವ್ಯಾಪಕ ಚರ್ಚೆಗೆ ಕಾರಣವಾಗಿತ್ತು.

ಒಟ್ಟಾರೆ, ದಕ್ಷಿಣ ಕನ್ನಡ ಜಿಲ್ಲಾ ಪೊಲೀಸರು ಡ್ರಗ್ಸ್ ಮಾಫಿಯಾದ ವಿರುದ್ಧ ನಿರಂತರ ದಾಳಿ ನಡೆಸಿ ಆರೋಪಿಗಳನ್ನು ಕಾನೂನು ಬಲೆಗೆ ಸಿಲುಕಿಸುವಲ್ಲಿ ಯಶಸ್ವಿಯಾಗುತ್ತಿದ್ದು, ಜಿಲ್ಲೆಯ ಯುವಜನತೆ ಹಾಗೂ ಸಮಾಜವನ್ನು ಮಾದಕ ವಸ್ತುಗಳ ದುಷ್ಪರಿಣಾಮದಿಂದ ರಕ್ಷಿಸುವ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿದ್ದಾರೆ.

## ಲಾರಿ, ಬೈಕ್ ನಡುವೆ ಮುಖಾಮುಖಿ ಡಿಕ್ಕಿ - ಸವಾರ ಸಾವು




**ಹಾವೇರಿ:**ಹಾನಗಲ್ ತಾಲೂಕಿನ ನಾಲ್ಕರ್ ಕ್ರಾಸ್ ಬಳಿ ಲಾರಿ ಮತ್ತು ಬೈಕ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಬೈಕ್ ಸವಾರ ಸಾವನ್ನಪ್ಪಿದ ಘಟನೆ ನಡೆದಿದೆ. ಹಾನಗಲ್ ಕಡೆಯಿಂದ ಹೊಂಕಣ ಗ್ರಾಮಕ್ಕೆ ಬೈಕ್‌ನಲ್ಲಿ ತೆರಳುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ. ಮೃತನನ್ನು ಹೊಂಕಣ ಗ್ರಾಮದ ನಿವಾಸಿ ನಟರಾಜ್ ದಳವಾಯಿ (43) ಎಂದು ಗುರುತಿಸಲಾಗಿದೆ. ಅಪಘಾತದ ತೀವ್ರತೆಯಿಂದ ಬೈಕ್ ಸಂಪೂರ್ಣ ನಜ್ಜುಗುಜ್ಜಾಗಿದ್ದು, ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎನ್ನಲಾಗಿದೆ.

ಘಟನೆಯ ಬಳಿಕ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಲಾರಿಯನ್ನು ವಶಕ್ಕೆ ಪಡೆದು ಚಾಲಕನನ್ನು ವಿಚಾರಣೆ ಮಾಡುತ್ತಿದ್ದಾರೆ. ಈ ಸಂಬಂಧ ಅಡೂರು ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ
ಸಂಪರ್ಕಿಸಿ
9538786812\8217606793

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಸವಿತಾ ಸಮಾಜದಿಂದ ಕ್ರಿಕೆಟ್ ಪಂದ್ಯಾವಳಿಗೆ ಸಚಿವ ಕೆಎಚ್ ಮುನಿಯಪ್ಪ ಅವರಿಂದ ಚಾಲನೆ



ದೇವನಹಳ್ಳಿ ಪಟ್ಟಣದ ಜೂನಿಯರ್ ಕಾಲೇಜು ಆಟದ ಮೃಧಾನದಲ್ಲಿ ಶ್ರೀ ಸವಿತಾ ಮಹರ್ಷಿ ಕಪ್ ಸೀಸನ್ 2 ಕ್ರಿಕೆಟ್ ಪಂದ್ಯಾವಳಿಗೆ ಆಹಾರ ಪೂರೈಕೆ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತು ವಾರಿ ಸಚಿವರು ಕೆ.ಹೆಚ್. ಮುನಿಯಪ್ಪ ಅವರು ಚಾಲನೆ ನೀಡಿ ಮಾತನಾಡಿ, ಸವಿತಾ ಸಮಾಜ ನಮ್ಮ ಜೀವನದ ದಿನನಿತ್ಯದ ಆಗು ಹೋಗುಗಳಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ನಾದ ಸ್ವರದ ಮೂಲಕ ನಮ್ಮ ಕಾರ್ಯಕ್ರಮಗಳಿಗೆ ಚಾಲನೆ ನೀಡುವುದು ಹಾಗೂ ನಮ್ಮ ಅಂದವನ್ನು ಹೆಚ್ಚಿಸುವ ಮೂಲಕ ಆತ್ಮ ವಿಶ್ವಾ ಸಕ್ಕೆ ಇಂಬು ನೀಡುವ ಕೆಲಸವನ್ನು ಈ ಸಮಾಜ ನಿರ್ವಹಿಸುತ್ತದೆ ಎಂದರು.

ನನ್ನ ರಾಜಕೀಯ ಅನುಭವದಲ್ಲಿ ಹೇಳುವುದಾದರೆ ಎಲ್ಲಾ ಸಮುದಾಯಗಳಿಗಿಂತ ಹೆಚ್ಚು ಬುದ್ಧಿವಂತರು ಸವಿತ ಸಮಾಜದವರು ಅವರ ರಾಜಕೀಯ ಸಲಹೆಯನ್ನು ಪಡೆದವರು ಪ್ರಜ್ಞಾವಂತ ರಾಜಕೀಯ ಪ್ರತಿನಿಧಿ ಆಗುವಷ್ಟು ಮಾಹಿತಿ ತಿಳಿದವರು, ಈ ಸಮುದಾಯಕ್ಕೆ ನನ್ನ ಸಂಪೂರ್ಣ ಸಹಕಾರ ವಿರುತ್ತದೆ. ಕ್ರೀಡಾಕೂಟದಲ್ಲಿ ಯುವಕರು ಹೆಚ್ಚು ಪಾಲ್ಗೊಂಡು ಜನಾಂಗಕ್ಕೆ ಅಗತ್ಯ ಕೊಡುಗೆ ನೀಡಲು ಇಂತಹ ಕ್ರೀಡಾಕೂಟ ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದಲ್ಲಿ ಸಾಧನೆಯನ್ನು ಪ್ರದರ್ಶಿಸುವಂತಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ದೇವನಹಳ್ಳಿ ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಜಗನ್ನಾಥ್, ಬ್ಲಾಕ್ ಕಾಂಗ್ರೆಸ್ ಅ ಕೆಸಿ,ಮಂಜುನಾಥ್, ಪುರಸಭೆ ಅಧ್ಯಕ್ಷ ಮುನಿಕೃಷ್ಣ , ಮುಖಂಡರಾದ ಚಿನ್ನಪ್ಪ , ಕಾರ ಹಳ್ಳಿ ಜಯರಾಮ್, ಶ್ರೀಧರ್, ವೆಂಕಟೇಶ್, ಸವಿತಾ ಸಮಾಜದ ಕೃಷ್ಣಮೂರ್ತಿ, ಲಾಯಕ್ ಕೃಷ್ಣಪ್ಪ, ಬಾಗೇ ಪಲ್ಲಿ ನೌಕರರ ಸಂಘದ ಅಧ್ಯಕ್ಷ ರಾಜಣ್ಣ , ನಾಗರೀಕ ಹಿತರಕ್ಷಣಾ ವೇದಿಕೆ ಅಧ್ಯಕ್ಷ. ನಾರಾಯಣ ಸ್ವಾಮಿ, ಕ್ಷೌರಿಕ ಕ್ಷೇಮಾಭಿವೃದ್ಧಿ ಸಂಘದ ರಾಮಚಂದ್ರಣ್ಣ , ಸವಿತಾ ಸಮಾಜದ ರಾಜ ಉಪಾಧ್ಯಕ್ಷ ರಾಮೂರ್ತಿ, ಕಾರ್ಯಾಧ್ಯಕ್ಷ ಮಂಜುನಾಥ್, ಕ್ರೀಡಾಪಟುಗಳು ಹಾಗೂ ಅಭಿಮಾನಿಗಳು ಹಾಜರಿದ್ದರು,

# ದೊಡ್ಡತುಮಕೂರು ಕೆರೆ, ಚಿಕ್ಕ ತುಮಕೂರು ಕೆರೆ ಸ್ಥಿತಿಗತಿ ಪರಿಶೀಲಿಸಿದ ಉಪಲೋಕಾಯುಕ್ತ ಬಿ.ವೀರಪ್ಪ



**ದೊಡ್ಡಬಳ್ಳಾಪುರ:** ತಾಲೂಕಿನ ಅರ್ಕಾವತಿ ನದಿ ಪಾತ್ರದಲ್ಲಿರುವ ಪ್ರಮುಖ ಜಲಾಶಯಗಳಾದ ದೊಡ್ಡತುಮಕೂರು ಕೆರೆ ಹಾಗೂ ಚಿಕ್ಕತುಮಕೂರು ಕೆರೆಗಳ ಇಂದಿನ ಸ್ಥಿತಿಗತಿಯನ್ನು ಉಪಲೋಕಾಯುಕ್ತ ಬಿ. ವೀರಪ್ಪ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಕೆರೆಗಳ ನೀರಿನ ಗುಣಮಟ್ಟ, ಅಕ್ಕಪಕ್ಕದ ಪ್ರದೇಶದ ಪರಿಸ್ಥಿತಿ ಹಾಗೂ ಪರಿಸರದ ಮೇಲೆ ಉಂಟಾಗುತ್ತಿರುವ ಪರಿಣಾಮಗಳ ಬಗ್ಗೆ ಸಮಗ್ರವಾಗಿ ಅವಲೋಕನ ನಡೆಸಿದರು.

ಪರಿಶೀಲನೆಯ ವೇಳೆ ಕೆರೆಗಳು ಕಲುಷಿತಗೊಳ್ಳಲು ಕಾರಣವಾಗಿರುವ ಅಂಶಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು, ಒಳಚರಂಡಿ ನೀರು, ತ್ಯಾಜ್ಯ ವಿಸರ್ಜನೆ, ಅಕ್ರಮ ವಸತಿ ಹಾಗೂ ಮಾನವ ಚಟುವಟಿಕೆಗಳಿಂದ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಚರ್ಚಿಸಿದರು. ಅಲ್ಲದೆ ಕೆರೆಗಳ ಸಂರಕ್ಷಣೆ, ಶುದ್ಧೀಕರಣ ಮತ್ತು ಪುನಶ್ಚೇತನಕ್ಕೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅಧಿಕಾರಿಗಳು ಹಾಗೂ ಸ್ಥಳೀಯರೊಂದಿಗೆ ವಿವರವಾಗಿ ಮಾತುಕತೆ ನಡೆಸಿದರು.

ಕೆರೆಗಳನ್ನು ರಕ್ಷಿಸುವ ನಿಟ್ಟಿನಲ್ಲಿ ತಕ್ಷಣ ಕೈಗೊಳ್ಳಬೇಕಾದ ತಾಂತ್ರಿಕ ಹಾಗೂ ಆಡಳಿತಾತ್ಮಕ ಕ್ರಮಗಳ ಬಗ್ಗೆ ಸೂಚನೆ ನೀಡಿದ ಉಪಲೋಕಾಯುಕ್ತರು, ಪರಿಸರ ಸಂರಕ್ಷಣೆ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಬಾರದು ಎಂದು ಅಧಿಕಾರಿಗಳಿಗೆ ಎಚ್ಚರಿಸಿದರು. ಜನಸಾಮಾನ್ಯರ ಸಹಭಾಗಿತ್ವದೊಂದಿಗೆ ಕೆರೆಗಳ ಉಳಿವಿಗೆ ಕ್ರಮ ಕೈಗೊಳ್ಳುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಪರಿಶೀಲನಾ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಎ.ಬಿ. ಬಸವರಾಜು, ಜಿಲ್ಲಾ ಪಂಚಾಯಿತಿ ಸಿಇಒ ಡಾ. ಅನುರಾಧಾ, ಸಹಾಯಕ ಆಯುಕ್ತೆ ದುರ್ಗಾಶ್ರೀ, ತಹಶೀಲ್ದಾರ್ ಮಲ್ಲಪ್ಪ, ಪರಿಸರ ಇಲಾಖೆಯ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸ್ಥಳೀಯ ಪ್ರತಿನಿಧಿಗಳು ಉಪಸ್ಥಿತರಿದ್ದು , ಕೆರೆಗಳ ಸ್ಥಿತಿಗತಿ ಕುರಿತು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಕೆರೆಗಳ ಸಂರಕ್ಷಣೆ ಹಾಗೂ ಅರ್ಕಾವತಿ ನದಿ ಪಾತ್ರದ ಪರಿಸರ ಸಮತೋಲನ ಕಾಪಾಡುವ ನಿಟ್ಟಿನಲ್ಲಿ ಈ ಪರಿಶೀಲನೆ ಮಹತ್ವದ ಹೆಜ್ಜೆಯಾಗಿದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟರು.

# ತಾಲ್ಲೂಕು ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರಾಗಿ ಎ.ಸಿ. ಮೋಹನ್ ಅವಿರೋಧ ಆಯ್ಕೆ



ಬ್ಯಾಂಕಿನ ಈ ಹಿಂದಿನ ಅಧ್ಯಕ್ಷ ರಾಗಿದ್ದ ಕಬ್ಬಲಗೆರೆಪುರ ಪುಟ್ಟಸ್ವಾಮಿಗೌಡ ಅವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಪಟ್ಟಣದ ಬ್ಯಾಂಕಿನ ಸಭಾಂಗಣದಲ್ಲಿ ನಿಗಧಿಯಾಗಿದ್ದ ಚುನಾವಣೆಯಲ್ಲಿ ಇಂದು ಚುನಾವಣೆ ನಿಗದಿಯಾಗಿತ್ತು ಅಧ್ಯಕ್ಷ ಸ್ಥಾನ ಬಯಸಿ ಎ.ಸಿ.ಮೋಹನ್ ಅವರನ್ನು ಹೊರತುಪಡಿಸಿ ಬೇರೆ ಯಾವುದೇ ನಿರ್ದೇಶಕರು ನಾಮಪತ್ರ ಸಲ್ಲಿಸದೇ ಇರುವ ಕಾರಣ ಎ.ಸಿ.ಮೋಹನ್ ಅವಿರೋಧವಾಗಿ ಆಯ್ಕೆಯಾದರು.

ಈ ಸಂದರ್ಭದಲ್ಲಿ ಪಿ.ಎಲ್.ಡಿ ಉಪಾಧ್ಯಕ್ಷ ಮಾರ್ಗೋನಹಳ್ಳಿ ರಮೇಶ್, ಬ್ಯಾಂಕ್ ಮಾಜಿ ಅಧ್ಯಕ್ಷ ಕಬ್ಬಲಗೆರೆಪುರ ಪುಟ್ಟಸ್ವಾಮಿಗೌಡ, ನಿರ್ದೇಶಕರಾದ ಅಣ್ಣೇಚಾಕನಹಳ್ಳಿ ನಾಗರಾಜೇಗೌಡ, ಅಕ್ಕಿಹೆಬ್ಬಾಳು ರಾಜಾನಾಯಕ್, ಬಣ್ಣೇನಹಳ್ಳಿ ಧನಂಜಯ, ಶೀಳನೆರೆ ರಾಮೇಗೌಡ, ಭಾರತೀಪುರ ಸುರೇಶ್, ಮಾಳಗೂರು ಜಗದೀಶ್, ಕೆ.ಟಿ.ಚಕ್ರಪಾಣಿ, ಅರೇಬೊಪ್ಪನಹಳ್ಳಿ ಸುನಿಲ್, ,ಲಕ್ಷ್ಮೀಪುರ ಚಂದ್ರೇಗೌಡ,ಬಂಡಿಹೊಳೆ ನಾಗೇಶ್, ಮಂಜುಳಾ ಕೃಷ್ಣೇಗೌಡ,ಕವಿತ ಚಂದ್ರೇಗೌಡ, ಮುಖಂಡರಾದ ಎ.ಸಿ.ಸೋಮೇಗೌಡ, ರಾಜೇಶ್, ಸಿ.ಜೆ.ಮಂಜೇಗೌಡ, ಸೇರಿದಂತೆ ಹಲವಾರು ಮುಖಂಡರು ಉಪಸ್ಥಿತರಿದ್ದರು.

ನೂತನ ಅಧ್ಯಕ್ಷ ಎ.ಸಿ.ಮೋಹನ್ ಅವರನ್ನು ಅಭಿನಂದಿಸಿ ಮಾತನಾಡಿದ ಬ್ಯಾಂಕ್ ಮಾಜಿ ಅಧ್ಯಕ್ಷ ಕಬ್ಬಲಗೆರೆಪುರ ಪುಟ್ಟಸ್ವಾಮಿಗೌಡ ಎಲ್ಲಾ ನಿರ್ದೇಶಕರು ಬ್ಯಾಂಕಿನ ಸಮಗ್ರ ಅಭಿವೃದ್ಧಿ ದೃಷ್ಟಿಯಿಂದ ಪಕ್ಷಾತೀತವಾಗಿ ಕೆಲಸ ಮಾಡುತ್ತಿದ್ದೇವೆ. ನೂತನ ಅಧ್ಯಕ್ಷರಾದ ಎ.ಸಿ. ಮೋಹನ್ ಅವರು ಯುವಕರಿದ್ದು ಬ್ಯಾಂಕಿನ ಅಭಿವೃದ್ಧಿಗೆ ಸರ್ಕಾರದಿಂದ ಸೂಕ್ತ ಅನುಧಾನ ತಂದು ಅಭಿವೃದ್ಧಿಗೆ ಸಹಕಾರ ನೀಡಬೇಕು. ಈ ಮೂಲಕ ರೈತರಿಗೆ ಹೆಚ್ಚಿನ ಸಾಲ ನೀಡಲು ಕ್ರಮ ವಹಿಸಬೇಕು ಎಲ್ಲರೂ ಅವರಿಗೆ ಸಹಕಾರ ನೀಡುತ್ತೇವೆ ಎಂದು ಸಲಹೆ ನೀಡಿದರು.

ನೂತನ ಪಿ.ಎಲ್.ಡಿ.ಬ್ಯಾಂಕ್ ಅಧ್ಯಕ್ಷ ಅರಳ ಕುಪ್ಪೆ ಎ.ಸಿ. ಮೋಹನ್ ಮಾತನಾಡಿ ನಾನು ಮೊದಲ ಬಾರಿಗೆ ಬ್ಯಾಂಕ್ ನಿರ್ದೇಶಕರಾಗಿ ಎಲ್ಲರ ಸಹಕಾರದಿಂದ ಅಧ್ಯಕ್ಷರನಾಗಿದ್ದೇನೆ. ನನಗೆ ಸಿಕ್ಕಿರುವ ಅಧಿಕಾರದ ಅವಧಿಯಲ್ಲಿ ಎಲ್ಲಾ ನಿರ್ದೇಶಕರು ಹಾಗೂ ಬ್ಯಾಂಕಿನ ನೌಕರರ ಸಹಕಾರದೊಂದಿಗೆ ಬ್ಯಾಂಕಿನ ಸರ್ವತೋಮುಖ ಅಭಿವೃದ್ಧಿಗೆ ನನಗೆ ಸಿಕ್ಕಿರುವ ಅಧಿಕಾರದ ಅವಧಿಯಲ್ಲಿ ಪ್ರಾಮಾಣಿಕವಾಗಿ ಕ್ರಿಯಾಶೀಲವಾಗಿ ಕೆಲಸ ಮಾಡುತ್ತೇನೆ ಎಂದು ಭರವಸೆ ನೀಡಿದರು.

# ದೇಗುಲದ ಬಾಗಿಲು ಮುರಿದು ಕನ್ನ ಹಾಕಿದ ಖದೀಮರು




**ಬೆಳಗಾವಿ:**ಸವದತ್ತಿ ತಾಲೂಕಿನ ದೂಪದಾಳ ಗ್ರಾಮದಲ್ಲಿರುವ ಪ್ರಸಿದ್ಧ ಭೀರೇಶ್ವರ ದೇವಸ್ಥಾನದಲ್ಲಿ ಕಳ್ಳತನ ನಡೆದಿದ್ದು , ಖದೀಮರು ದೇಗುಲದಲ್ಲಿದ್ದ ಬೆಳ್ಳಿ ಹಾಗೂ ಚಿನ್ನಾಭರಣಗಳನ್ನು ದೋಚಿಕೊಂಡು ಪರಾರಿಯಾಗಿರುವ ಘಟನೆ ನಡೆದಿದೆ. ಈ ಕಳ್ಳತನದಿಂದ ಗ್ರಾಮದಲ್ಲಿ ಆತಂಕ ಮತ್ತು ಆಕ್ರೋಶ ವ್ಯಕ್ತವಾಗಿದೆ.

ರಾತ್ರಿ ವೇಳೆ ದೇಗುಲದ ಬಾಗಿಲು ಮುರಿದು ಒಳಪ್ರವೇಶಿಸಿದ ಕಳ್ಳರು, ದೇವಾಲಯದಲ್ಲಿದ್ದ ಅಮೂಲ್ಯ ವಸ್ತುಗಳನ್ನು ಗುರಿಯಾಗಿಸಿಕೊಂಡಿದ್ದಾರೆ. ಸುಮಾರು 2 ಕೆಜಿ ತೂಕದ ಬೆಳ್ಳಿಯ ಕುದುರೆ ಹಾಗೂ ಎರಡು ಚಿನ್ನದ ಸರಗಳನ್ನು ಕಳ್ಳತನ ಮಾಡಿದ್ದಾರೆ ಎಂದು ತಿಳಿದುಬಂದಿದೆ. ಅಲ್ಲದೆ ಭೀರೇಶ್ವರ ದೇವರ ಖಂಚಿನ ಮೂರ್ತಿಯನ್ನೂ ಆರೋಪಿಗಳು ಹೊತ್ತೊಯ್ದಿದ್ದಾರೆ.

ಆದರೆ ದೇವರ ಮೂರ್ತಿಯನ್ನು ಹೆಚ್ಚು ದೂರ ಸಾಗಿಸಲು ಸಾಧ್ಯವಾಗದ ಕಾರಣ, ಕಳ್ಳರು ಅದನ್ನು ಗ್ರಾಮದ ಹೊರವಲಯದಲ್ಲಿ ಎಸೆದು ಪರಾರಿಯಾಗಿದ್ದಾರೆ ಎನ್ನಲಾಗಿದೆ. ಬೆಳಿಗ್ಗೆ ಗ್ರಾಮಸ್ಥರು ಹೊರವಲಯದಲ್ಲಿ ಬಿದ್ದಿರುವ ದೇವರ ಮೂರ್ತಿಯನ್ನು ಕಂಡು ಬೆಚ್ಚಿಬಿದ್ದಿದ್ದು , ಘಟನೆಯ ಸುದ್ದಿ ಗ್ರಾಮದಲ್ಲಿ ವೇಗವಾಗಿ ಹರಡಿದೆ. ಇದರಿಂದ ಭಕ್ತರಲ್ಲಿ ಆತಂಕ ಮತ್ತು ಅಸಮಾಧಾನ ಉಂಟಾಗಿದೆ.

ಘಟನೆಯ ಮಾಹಿತಿ ಪಡೆದ ಸವದತ್ತಿ ಪೊಲೀಸ್ ಠಾಣೆಯ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣವನ್ನು ದಾಖಲಿಸಿಕೊಂಡು ಕಳ್ಳರ ಪತ್ತೆಗಾಗಿ ತನಿಖೆ ಆರಂಭಿಸಲಾಗಿದೆ. ದೇವಸ್ಥಾನದ ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುವ ಜೊತೆಗೆ, ಆರೋಪಿಗಳ ಬಂಧನಕ್ಕೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ.

ಈ ಕಳ್ಳತನದ ಘಟನೆಯಿಂದ ಗ್ರಾಮಸ್ಥರು ದೇವಾಲಯಗಳ ಭದ್ರತೆ ಬಗ್ಗೆ ಆತಂಕ ವ್ಯಕ್ತಪಡಿಸಿದ್ದು , ಶೀಘ್ರವಾಗಿ ಆರೋಪಿಗಳನ್ನು ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕೆಂದು ಪೊಲೀಸರನ್ನು ಒತ್ತಾಯಿಸಿದ್ದಾರೆ.

# ರಿಯಲ್ ಎಸ್ಟೇಟ್ ಉದ್ಯಮಿಯ ಭೀಕರ ಕೃತ್ಯ ಪತ್ನಿ ಮೂಲಕ ಹನಿಟ್ರ್ಯಾಪ್, ಲಕ್ಷಾಂತರ ರೂ. ಸುಲಿಗೆ





**ಹೈದರಾಬಾದ್:** ಸಾಲದ ಹೊರೆ ತೀರಿಸಲು ರಿಯಲ್ ಎಸ್ಟೇಟ್ ಉದ್ಯಮಿಯೊಬ್ಬ ತನ್ನ ಸ್ವಂತ ಪತ್ನಿಯನ್ನೇ ಉಪಯೋಗಿಸಿಕೊಂಡು ಭಾರೀ ಹನಿಟ್ರ್ಯಾಪ್ ಜಾಲವೊಂದನ್ನು ನಡೆಸಿ, ನೂರಾರು ಪುರುಷರನ್ನು ಬ್ಲ್ಯಾಕ್‌ಮೇಲ್ ಮಾಡಿ ಕೋಟ್ಯಂತರ ರೂಪಾಯಿ ವಸೂಲಿ ಮಾಡಿರುವ ಭೀಕರ ಘಟನೆ ತೆಲಂಗಾಣದ ಕರೀಂನಗರದಲ್ಲಿ ಬೆಳಕಿಗೆ ಬಂದಿದೆ. ಈ ಪ್ರಕರಣ ರಾಜ್ಯಾದ್ಯಂತ ಭಾರೀ ಸಂಚಲನ ಮೂಡಿಸಿದೆ.

ಪೊಲೀಸರ ಮಾಹಿತಿಯಂತೆ, ಬಂಧಿತ ಮಹಿಳೆಯನ್ನು ಲಲಿತಾ ಎಂದು ಗುರುತಿಸಲಾಗಿದೆ. ಈಕೆ ಇನ್‌ಸ್ಟಾಗ್ರಾಮ್, ಯೂಟ್ಯೂಬ್ ಸೇರಿದಂತೆ ವಿವಿಧ ಸಾಮಾಜಿಕ ಜಾಲತಾಣಗಳನ್ನು ಬಳಸಿಕೊಂಡು ಶ್ರೀಮಂತ ಮತ್ತು ಪ್ರಭಾವಿ ಪುರುಷರನ್ನು ಗುರಿಯಾಗಿಸಿಕೊಂಡು ಸಂಪರ್ಕ ಸಾಧಿಸುತ್ತಿದ್ದಳು. ಆರಂಭದಲ್ಲಿ ಸ್ನೇಹಪೂರ್ಣವಾಗಿ ಹಾಗೂ ಅಕ್ಕರೆಯಿಂದ ಮಾತನಾಡಿ, ನಿಧಾನವಾಗಿ ಅವರ ವಿಶ್ವಾಸ ಗಳಿಸುತ್ತಿದ್ದಳು. ಬಳಿಕ ಅವರನ್ನು ತನ್ನ ಮನೆಗೆ ಆಹ್ವಾನಿಸುತ್ತಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ.

ಈ ನಡುವೆ ಲಲಿತಾಳ ಪತಿ ಮನೆಗೆ ಬರುವ ಪುರುಷರ ಖಾಸಗಿ ಕ್ಷಣಗಳನ್ನು ಚಿತ್ರೀಕರಿಸಲು ಮನೆಯ ವಿವಿಧ ಭಾಗಗಳಲ್ಲಿ ಗುಪ್ತ ಕ್ಯಾಮೆರಾಗಳನ್ನು ಅಳವಡಿಸಿದ್ದನು. ಮಹಿಳೆ ಮತ್ತು ಸಂತ್ರಸ್ತ ಪುರುಷರ ಖಾಸಗಿ ಕ್ಷಣಗಳು ರಹಸ್ಯವಾಗಿ ಕ್ಯಾಮೆರಾದಲ್ಲಿ ಸೆರೆಹಿಡಿಯಲ್ಪಡುತ್ತಿದ್ದಂತೆ, ದಂಪತಿಗಳು ಆ ವಿಡಿಯೋಗಳನ್ನು ಆಧಾರವಾಗಿ ಮಾಡಿಕೊಂಡು ಸಂತ್ರಸ್ತರನ್ನು ಬ್ಲ್ಯಾಕ್‌ಮೇಲ್ ಮಾಡುತ್ತಿದ್ದರು.

ಹಣ ನೀಡದಿದ್ದಲ್ಲಿ ಈ ಖಾಸಗಿ ವಿಡಿಯೋಗಳನ್ನು ಕುಟುಂಬದವರಿಗೆ ಕಳುಹಿಸುವುದಾಗಿ ಅಥವಾ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಮಾಡುವುದಾಗಿ ಬೆದರಿಕೆ ಹಾಕಿ ಲಕ್ಷಾಂತರ ರೂಪಾಯಿ ಸುಲಿಗೆ ಮಾಡಲಾಗುತ್ತಿತ್ತು. ಭಯದಿಂದ ಹಲವರು ಹಣ ನೀಡಿದ್ದು , ಈ ದಂಧೆ ದೀರ್ಘಕಾಲ ನಡೆದುಬಂದಿದೆ ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಇತ್ತೀಚೆಗೆ ಲಾರಿ ಮಾಲೀಕರೊಬ್ಬರು ಈ ದಂಪತಿಯ ಹನಿಟ್ರ್ಯಾಪ್ ಜಾಲಕ್ಕೆ ಸಿಲುಕಿದ್ದರು. ಈಗಾಗಲೇ ಅವರು 13 ಲಕ್ಷ ರೂಪಾಯಿ ಪಾವತಿಸಿದ್ದರೂ, ಮತ್ತೆ 5 ಲಕ್ಷ ರೂಪಾಯಿ ನೀಡುವಂತೆ ಒತ್ತಡ ಹಾಕಲಾಗಿತ್ತು. ಜೊತೆಗೆ ಕೊಲೆ ಬೆದರಿಕೆ ನೀಡಲಾಗಿದ್ದರಿಂದ ಆತ ಭಯಭೀತನಾಗಿ, ಕೊನೆಗೆ ಧೈರ್ಯ ಮಾಡಿ ಪೊಲೀಸರ ಬಳಿ ದೂರು ನೀಡಿದ್ದಾನೆ. ಈ ದೂರಿನ ಆಧಾರದ ಮೇಲೆ ತನಿಖೆ ಆರಂಭಿಸಿದಾಗ ಈ ಬೃಹತ್ ಹನಿಟ್ರ್ಯಾಪ್ ಪ್ರಕರಣ ಬಹಿರಂಗವಾಗಿದೆ.

ಪೊಲೀಸರು ನಡೆಸಿದ ತನಿಖೆಯಲ್ಲಿ, ಈ ದಂಪತಿಗಳು ಇದೇ ರೀತಿಯಲ್ಲಿ 100ಕ್ಕೂ ಹೆಚ್ಚು ಪುರುಷರನ್ನು ಮೋಸಗೊಳಿಸಿರುವುದು ಪತ್ತೆಯಾಗಿದೆ. ದಂಧೆಯಿಂದ ಸಂಗ್ರಹಿಸಿದ ಹಣದಿಂದ ಅವರು 65 ಲಕ್ಷ ರೂಪಾಯಿ ಮೌಲ್ಯದ ನಿವೇಶನ, 10 ಲಕ್ಷ ರೂಪಾಯಿ ಬೆಲೆಯ ಕಾರು, ಸೇರಿದಂತೆ ಹಲವು ಆಸ್ತಿಗಳನ್ನು ಖರೀದಿಸಿದ್ದರು. ಅಲ್ಲದೇ, ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ಮಾಡಿಕೊಂಡಿದ್ದ ಸಾಲ ಹಾಗೂ ಬ್ಯಾಂಕ್ ಇಎಂಐಗಳನ್ನು ಈ ಬ್ಲ್ಯಾಕ್‌ಮೇಲ್ ಹಣದಿಂದಲೇ ಪಾವತಿಸುತ್ತಿದ್ದರು ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಬಂಧಿತರ ಬಳಿಯಿಂದ ಪೊಲೀಸರು ಹಲವು ಮೊಬೈಲ್ ಫೋನ್‌ಗಳು, ಹಾರ್ಡ್ ಡಿಸ್ಕ್‌ಗಳು, ಚೆಕ್‌ಗಳು ಸೇರಿದಂತೆ ಮಹತ್ವದ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ. ಈ ಎಲ್ಲಾ ವಸ್ತುಗಳನ್ನು ಆಧಾರವಾಗಿಸಿಕೊಂಡು ಮುಂದಿನ ತನಿಖೆ ಮುಂದುವರಿದಿದೆ.

# ರಾಷ್ಟ್ರಗೀತೆ ಅವಮಾನ ಹಿನ್ನೆಲೆ: ಸದನ ತೊರೆದ ರಾಜ್ಯಪಾಲ ಆರ್.ಎನ್. ರವಿ



**ಚೆನ್ನೈ:** ತಮಿಳುನಾಡು ವಿಧಾನಸಭೆಯಲ್ಲಿ ಇಂದು ಸಂಭವಿಸಿದ ಅಸಾಮಾನ್ಯ ಘಟನೆಯೊಂದು ರಾಜ್ಯ ರಾಜಕಾರಣದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ. ರಾಷ್ಟ್ರಗೀತೆ ಹೇಳುತ್ತಿದ್ದ ವೇಳೆಯಲ್ಲೇ ತಮಿಳುನಾಡಿನ ರಾಜ್ಯಪಾಲ ಆರ್. ಎನ್. ರವಿ (RN Ravi) ವಿಧಾನಸಭೆಯಿಂದ ಹೊರನಡೆದಿದ್ದಾರೆ. ಈ ನಡೆ ರಾಷ್ಟ್ರಗೀತೆಗೆ ಅವಮಾನವಾಗಿದ್ದು , ಸಾಂವಿಧಾನಿಕ ಕರ್ತವ್ಯವನ್ನು ನಿರ್ಲಕ್ಷಿಸಿದಂತಾಗಿದೆ ಎಂದು ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷಗಳು ಆರೋಪಿಸಿವೆ.

ವಿಧಾನಸಭೆ ಅಧಿವೇಶನದ ಆರಂಭದಲ್ಲಿ ತಮಿಳುನಾಡಿನ ನಾಡಗೀತೆಯಾದ 'ತಮಿಳ್ ತಾಯಿ ವಾಜ್ತು' ನುಡಿಸಲಾಯಿತು. ನಂತರ ರಾಷ್ಟ್ರಗೀತೆಯನ್ನೂ ನುಡಿಸಬೇಕು ಎಂಬ ನಿರ್ಧಾರವನ್ನು ಸಭೆಯಲ್ಲಿ ಹೇಳಲಾಯಿತು. ಆದರೆ ಶಿಷ್ಟಾಚಾರದ ಪ್ರಕಾರ ರಾಜ್ಯಪಾಲರು ಮೊದಲಿಗೆ ಭಾಷಣ ಮಾಡಬೇಕು ಎಂಬ ಸಂಪ್ರದಾಯವಿದೆ. ಈ ಕ್ರಮವನ್ನು ಪಾಲಿಸದೇ ಮೊದಲು ನಾಡಗೀತೆಯನ್ನು ನುಡಿಸಿರುವುದು ರಾಜ್ಯಪಾಲರಿಗೆ ತೀವ್ರ ಅಸಮಾಧಾನ ಕಾರಣವಾಯಿತು ಎನ್ನಲಾಗಿದೆ.

ನಾಡಗೀತೆ ನುಡಿಸಿದ ಬಳಿಕ ರಾಷ್ಟ್ರಗೀತೆಯನ್ನು ಆರಂಭಿಸಲಾಯಿತು. ಈ ವೇಳೆ ರಾಜ್ಯಪಾಲ ಆರ್.ಎನ್. ರವಿ ತಕ್ಷಣವೇ ತಮ್ಮ ಆಸನದಿಂದ ಎದ್ದು, ರಾಷ್ಟ್ರಗೀತೆಯ ಮಧ್ಯೆಯೇ ಸದನದಿಂದ ಹೊರನಡೆದರು. ಈ ದೃಶ್ಯವು ವಿಧಾನಸಭೆಯಲ್ಲಿ ಕೆಲ ಕ್ಷಣಗಳ ಕಾಲ ಗೊಂದಲ ಮತ್ತು ಗದ್ದಲಕ್ಕೆ ಕಾರಣವಾಯಿತು. ಹಲವು ಸದಸ್ಯರು ಅಚ್ಚರಿ ವ್ಯಕ್ತಪಡಿಸಿದರೆ, ಕೆಲವರು ಇದನ್ನು ರಾಷ್ಟ್ರಗೀತೆಗೆ ಮಾಡಿದ ಅವಮಾನವೆಂದು ಖಂಡಿಸಿದರು.

ಈ ಘಟನೆ ಬಳಿಕ ತಮಿಳುನಾಡು ಸರ್ಕಾರದ ಪರವಾಗಿ ಲೋಕಭವನ (Raj Bhavan) ಸ್ಪಷ್ಟನೆ ನೀಡಲಾಗಿದೆ. ರಾಜ್ಯಪಾಲರು ಸದನದಿಂದ ಹೊರನಡೆದಿರುವುದಕ್ಕೆ ಕಾರಣವಿದೆ ಎಂದು ಹೇಳಿರುವ ಲೋಕಭವನ, "ರಾಜ್ಯಪಾಲರಿಗೆ ಮಾತನಾಡಲು ಅವಕಾಶ ನೀಡಲಾಗಲಿಲ್ಲ. ಅವರು ಭಾಷಣ ಆರಂಭಿಸಲು ಯತ್ನಿಸಿದಾಗ ಪದೇಪದೇ ಮೈಕ್ ಅನ್ನು ಸ್ವಿಚ್ ಆಫ್ ಮಾಡಲಾಯಿತು. ಇದರಿಂದ ರಾಜ್ಯಪಾಲರು ತೀವ್ರ ಬೇಸರಗೊಂಡರು" ಎಂದು ಹೇಳಿಕೆಯಲ್ಲಿ ತಿಳಿಸಿದೆ.

ಆದರೆ ಸರ್ಕಾರದ ವಲಯಗಳು ಮತ್ತು ಆಡಳಿತ ಪಕ್ಷ ಡಿಎಂಕೆ (DMK) ನಾಯಕರು ಇದನ್ನು ತಳ್ಳಿ ಹಾಕಿದ್ದು , "ಇದು ರಾಜ್ಯಪಾಲರ ಅಹಂಕಾರ ಮತ್ತು ಅಸಹನೆಯನ್ನು ತೋರಿಸುತ್ತದೆ. ರಾಷ್ಟ್ರಗೀತೆ ನುಡಿಸುವ ವೇಳೆ ಸದನ ತ್ಯಜಿಸುವುದು ಯಾವುದೇ ಕಾರಣಕ್ಕೂ ಸಮರ್ಥನೀಯವಲ್ಲ" ಎಂದು ಟೀಕಿಸಿದ್ದಾರೆ. ರಾಷ್ಟ್ರಗೀತೆ ದೇಶದ ಗೌರವ ಮತ್ತು ಏಕತೆಯ ಪ್ರತೀಕವಾಗಿದ್ದು , ಸಂವಿಧಾನಾತ್ಮಕ ಹುದ್ದೆಯಲ್ಲಿರುವ ವ್ಯಕ್ತಿಯೊಬ್ಬರು ಇಂತಹ ನಡೆ ತೋರಿರುವುದು ಖಂಡನೀಯ ಎಂದು ಹೇಳಿದ್ದಾರೆ.

# ಮನೆಯೊಳಗೆ 10ನೇ ಶತಮಾನದ ಅರ್ಧನಾರೀಶ್ವರ ದೇವಾಲಯ ಪತ್ತೆ

**ಗದಗ:** ಜಿಲ್ಲೆಯ ಐತಿಹಾಸಿಕ ಲಕ್ಕುಂಡಿ ಗ್ರಾಮದ ನೆಲದಡಿ ಬಗೆದಷ್ಟು ಪುರಾತನ ವಸ್ತುಗಳು ಪತ್ತೆಯಾಗುತ್ತಲೇ ಇದೆ. ಗದಗ ತಾಲೂಕಿಗೆ ಸೇರಿದ ಲಕ್ಕುಂಡಿ ಗ್ರಾಮದ ಚೌಕಿಮಠ ಕುಟುಂಬದ ವಾಸದ ಮನೆಯೊಳಗೆ, ಶತಮಾನಗಳ ಕಾಲ ಮಣ್ಣಿನಡಿಯಲ್ಲಿ ಹುದುಗಿದ್ದ ಪ್ರಾಚೀನ ಅರ್ಧನಾರೀಶ್ವರ ದೇವಾಲಯ ಪತ್ತೆಯಾಗಿದೆ.

ಶಿವಯ್ಯ ಹಾಗೂ ಶೇಖರಯ್ಯ ಚೌಕಿಮಠ ಎಂಬವರ ಕುಟುಂಬಗಳು ಈ ದೇವಾಲಯದ ಆವರಣದಲ್ಲಿಯೇ ಮನೆ ಕಟ್ಟಿಕೊಂಡು ವರ್ಷಗಳಿಂದ ವಾಸಿಸುತ್ತಿವೆ. ಈ ಮನೆಯಲ್ಲಿ ಸುಮಾರು ಐದು ರಿಂದ ಆರು ಮಂದಿ ವಾಸಿಸುತ್ತಿದ್ದಾರೆ. ಮನೆಯ ಹೊರಭಾಗ ಸಂಪೂರ್ಣವಾಗಿ ವಾಸದ ಕಟ್ಟಡವಾಗಿದ್ದರೂ, ಒಳಭಾಗದಲ್ಲಿ ಸುಮಾರು ಹತ್ತು ಅಡಿ ಮಣ್ಣಿನಡಿಯಲ್ಲಿ ಚಾಲುಕ್ಯರ ಕಾಲದ ಪುರಾತನ ದೇವಾಲಯ ಇರುವುದನ್ನು ತಪಾಸಣೆಯಲ್ಲಿ ಪತ್ತೆ ಹಚ್ಚಲಾಗಿದೆ. ಈ ದೇವಾಲಯವು 10ರಿಂದ 11ನೇ ಶತಮಾನಕ್ಕೆ ಸೇರಿದ ಚಾಲುಕ್ಯರ ಕಾಲದ ಈಶ್ವರ ದೇವಾಲಯವಾಗಿದ್ದು , ಅರ್ಧನಾರೀಶ್ವರ ರೂಪದ ಶಿವನ ಮೂರ್ತಿ ಇಲ್ಲಿ ಸ್ಥಾಪಿತವಾಗಿದೆ. ದೇವಾಲಯದ ಗರ್ಭಗುಡಿ, ಶಿಲ್ಪ ಕೆತ್ತನೆಗಳು, ಕಂಬಗಳು ಮತ್ತು ವಾಸ್ತು ವಿನ್ಯಾಸಗಳು ಆ ಕಾಲದ ಶಿಲ್ಪಕಲೆಯ ಶ್ರೇಷ್ಠತೆಯನ್ನು ಪ್ರತಿಬಿಂಬಿಸುತ್ತವೆ.

ಈ ದೇವಾಲಯದಲ್ಲಿ ಕಾಣಿಸಿಕೊಳ್ಳುವ ಶಿಲ್ಪಗಳು, ನಿಖರ ಕೆತ್ತನೆಗಳು ಹಾಗೂ



ವಾಸ್ತುಶಿಲ್ಪವು ಲಕ್ಕುಂಡಿಯು ಒಮ್ಮೆ ಚಾಲುಕ್ಯರ ಕಾಲದ ಪ್ರಮುಖ ಧಾರ್ಮಿಕ ಮತ್ತು ಸಾಂಸ್ಕೃತಿಕ ಕೇಂದ್ರವಾಗಿತ್ತು ಎಂಬುದಕ್ಕೆ ಮತ್ತೊಂದು ಸಾಕ್ಷಿಯಾಗಿದೆ.

ಈ ದೇವಾಲಯದಲ್ಲಿ ಕಾಣಿಸಿಕೊಳ್ಳುವ ಶಿಲ್ಪಗಳು, ನಿಖರ ಕೆತ್ತನೆಗಳು ಮತ್ತು ವಿಶಿಷ್ಟ ವಾಸ್ತು ವಿನ್ಯಾಸಗಳು ಲಕ್ಕುಂಡಿಯು ಒಮ್ಮೆ ಚಾಲುಕ್ಯರ ಕಾಲದಲ್ಲಿ ಪ್ರಮುಖ ಧಾರ್ಮಿಕ ಮತ್ತು ಸಾಂಸ್ಕೃತಿಕ ಕೇಂದ್ರವಾಗಿತ್ತು ಎಂಬುದಕ್ಕೆ ಮತ್ತೊಂದು ಬಲವಾದ ಐತಿಹಾಸಿಕ ಸಾಕ್ಷಿಯಾಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.